# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | | 514 |
| ಸದಸ್ಯರ ಹೆಸರು | | ಶ್ರೀ ತಳವಾರ ಸಾಬಣ್ಣ<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | | 20.02.2023 |
| ಉತ್ತರಿಸುವ ಸಚಿವರು | | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಕ್ರ. ಸಂ | ಪ್ರಶ್ನೆ | ಉತ್ತರ |
| ಅ) | ರಾಜ್ಯದ ಸರ್ಕಾರದ ಅಧೀನದಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ ಎಷ್ಟು ಜನ ಶಿಕ್ಷಕೇತರ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ; | ಉನ್ನತ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ ಒಟ್ಟು 3,097 ಶಿಕ್ಷಕೇತರ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ, ವಿವರವು ಈ ಕೆಳಗಿನಂತಿದೆ. |

| ಕ್ರ ಸಂ | ವಿಶ್ವವಿದ್ಯಾಲಯದ ಹೆಸರು | ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ |
|---|---|---|
| 1 | ಬೆಂಗಳೂರು ವಿಶ್ವವಿದ್ಯಾಲಯ | 424 |
| 2 | ಮೈಸೂರು ವಿಶ್ವವಿದ್ಯಾಲಯ, | 513 |
| 3 | ಕರ್ನಾಟಕ ವಿಶ್ವವಿದ್ಯಾಲಯ | 393 |
| 4 | ಕುವೆಂಪು ವಿಶ್ವವಿದ್ಯಾಲಯ, | 273 |
| 5 | ಗುಲ್ಬರ್ಗ ವಿಶ್ವವಿದ್ಯಾಲಯ | 173 |
| 6 | ಮಂಗಳೂರು ವಿಶ್ವವಿದ್ಯಾಲಯ, | 202 |
| 7 | ತುಮಕೂರು ವಿಶ್ವವಿದ್ಯಾಲಯ | 51 |
| 8 | ಕನ್ನಡ ವಿಶ್ವವಿದ್ಯಾಲಯ, | 155 |
| 9 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ | 279 |
| 10 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ | 14 |
| 11 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ | 306 |
| 12 | ದಾವಣಗೆರೆ ವಿಶ್ವವಿದ್ಯಾಲಯ | 33 |
| 13 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, | 53 |
| 14 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ | 142 |
| 15 | ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ | 10 |
| 16 | ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, | 12 |
| 17 | ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, | 29 |
| 18 | ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, | 12 |
| 19 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ | 08 |
| 20 | ರಾಯಚೂರು ವಿಶ್ವವಿದ್ಯಾಲಯ | 04 |
| 21 | ಮಂಡ್ಯ ವಿಶ್ವವಿದ್ಯಾಲಯ, | 02 |
| 22 | ನೃಪತುಂಗ ವಿಶ್ವವಿದ್ಯಾಲಯ | |
| 23 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ | 05 |
| 24 | ಡಾ. ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯೂನಿವರ್ಸಿಟಿ | 04. |

...2

| | | |
|---|---|---|
| ಆ) | ವಿಶ್ವವಿದ್ಯಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕೇತರ ಸಿಬ್ಬಂದಿಗೆ ಪದೋನ್ನತಿಗಾಗಿ (ಪ್ರಮೋಷನ್) ಇರುವ ಮಾರ್ಗಸೂಚಿಗಳು ಅಥವಾ ನಿಯಮಗಳೇನು (Statutes): ಅವು ಯಾವುವು: | ರಾಜ್ಯ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರತಿಯೊಂದು ವಿಶ್ವವಿದ್ಯಾಲಯಗಳು ಶಿಕ್ಷಕೇತರ ಸಿಬ್ಬಂದಿಗಳ ಪದೋನ್ನತಿಗಾಗಿ (ಪ್ರಮೋಷನ್) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ 2000 ಪ್ರಕರಣ 41ರ ನಿಯಮಗಳನ್ವಯ ಹಾಗೂ ಶಿಕ್ಷಕೇತರ ಸಿಬ್ಬಂದಿಗಳ ಸೇವಾ ವಿಷಯಗಳಿಗೆ ಸಂಬಂದಿಸಿದಂತೆ ಕಾಲಕಾಲಕ್ಕೆ ರಾಜ್ಯ ಸರ್ಕಾರವು ಹೊರಡಿಸುವ ಆದೇಶ, ಸುತ್ತೋಲೆಗಳನ್ವಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಂಬಂಧಿಸಿದಂತೆ ಆಯಾ ವಿಶ್ವವಿದ್ಯಾಲಯಗಳು ಪರಿನಿಯಮಾಗಳನ್ನು ರಚಿಸಿಕೊಂಡು, ಸದರಿ ಪರಿನಿಯಮಾವಳಿಗೆ ಕುಲಾಧಿಪತಿಯವರಿಂದ ಅಂಕಿತ ಪಡೆದು, ಅದರಂತೆ ಕ್ರಮವಹಿಸಲಾಗುತ್ತದೆ. |
| ಇ) | ಶಿಕ್ಷಕೇತರ ಸಿಬ್ಬಂದಿ ಅರ್ಹತೆ ಬಂದ ತಕ್ಷಣ (Time-bond) ಪದೋನ್ನತಿ ನೀಡಲು ವಿಳಂಬವಾಗುತ್ತಿರಲು ಕಾರಣಗಳೇನು: | ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳು ಸ್ವಾಯತ್ತ ಸಂಸ್ಥೆಗಳಾಗಿದ್ದು, ಪ್ರತಿಯೊಂದು ವಿಶ್ವವಿದ್ಯಾಲಯಗಳು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಂಬಂದಿಸಿದಂತೆ ಪರಿನಿಯಮಗಳನ್ನು ರಚಿಸಿಕೊಂಡು ಶಿಕ್ಷಕೇತರ ಸಿಬ್ಬಂದಿಗಳಿಗೆ ಜೇಷ್ಠತೆ ಆಧಾರದ ಮೇಲೆ ಹಾಗೂ ಅರ್ಹತೆಗನುಗುಣವಾಗಿ ಕಾಲಕಾಲಕ್ಕೆ ಪದೋನ್ನತಿಯನ್ನು ನೀಡಲಾಗುತ್ತಿದೆ.<br><br>ಈ ರೀತಿಯ ಪದೋನ್ನತಿಗಳಲ್ಲಿ ಯಾವುದೇ ರೀತಿಯ ವಿಳಂಬ ಮಾಡದೆ, ಕ್ರಮವಹಿಸಲು ವಿಶ್ವವಿದ್ಯಾಲಯಗಳಿಗೆ ನಿರ್ದೇಶನ ನೀಡಲು ಕ್ರಮವಹಿಸಲಾಗುತ್ತಿದೆ. |
| ಈ) | ವಿಶ್ವವಿದ್ಯಾಲಯಗಳಲ್ಲಿ ಶಿಕ್ಷಕೇತರ ಸಿಬ್ಬಂದಿ ಪದೋನ್ನತಿ ವಿಷಯದಲ್ಲಿ ತಾರತಮ್ಯವಿರುವುದೇಕೆ: | |
| ಉ | ಶಿಕ್ಷಕೇತರಿಗೆ ಸೂಕ್ತ ಸಮಯದಲ್ಲಿ ಪದೋನ್ನತಿ ನೀಡಲು ವಿಶ್ವವಿದ್ಯಾಲಯಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಲು ಸರ್ಕಾರವು ಕ್ರಮ ವಹಿಸುವುದೇ? | |

**ಸಂಖ್ಯೆ: ಇಡಿ 25 ಯುಎನ್‌ಇ 2023**

**(ಡಾ: ಅಶ್ವಥ್ ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ
ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ
ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಳವಾರ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 514ಕ್ಕೆ ಪೂರಕ ಟಿಪ್ಪಣಿ**

- ಉನ್ನತ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ ಒಟ್ಟು 3,097 ಶಿಕ್ಷಕೇತರ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.

- ರಾಜ್ಯ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರತಿಯೊಂದು ವಿಶ್ವವಿದ್ಯಾಲಯಗಳು ಶಿಕ್ಷಕೇತರ ಸಿಬ್ಬಂದಿಗಳ ಪದೋನ್ನತಿಗಾಗಿ (ಪ್ರಮೋಷನ್) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ 2000 ಪ್ರಕರಣ 41ರ ನಿಯಮಗಳನ್ವಯ ಹಾಗೂ ಶಿಕ್ಷಕೇತರ ಸಿಬ್ಬಂದಿಗಳ ಸೇವಾ ವಿಷಯಗಳಿಗೆ ಸಂಬಂದಿಸಿದಂತೆ ಕಾಲಕಾಲಕ್ಕೆ ರಾಜ್ಯ ಸರ್ಕಾರವು ಹೊರಡಿಸುವ ಆದೇಶ, ಸುತ್ತೋಲೆಗಳನ್ವಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಂಬಂಧಿಸಿದಂತೆ ಪರಿನಿಯಮಾಗಳನ್ನು ರಚಿಸಿಕೊಂಡು, ಸದರಿ ಪರಿನಿಯಮಾವಳಿಗೆ ಕುಲಾಧಿಪತಿಯವರಿಂದ ಅಂಕಿತ ಪಡೆದು, ಅದರಂತೆ ಕ್ರಮವಹಿಸಲಾಗುತ್ತದೆ.

- ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳು ಸ್ವಾಯತ್ತ ಸಂಸ್ಥೆಗಳಾಗಿದ್ದು, ಪ್ರತಿಯೊಂದು ವಿಶ್ವವಿದ್ಯಾಲಯಗಳು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಂಬಂದಿಸಿದಂತೆ ಪರಿನಿಯಮಗಳನ್ನು ರಚಿಸಿಕೊಂಡು ಶಿಕ್ಷಕೇತರ ಸಿಬ್ಬಂದಿಗಳಿಗೆ ಜೇಷ್ಠತೆ ಆಧಾರದ ಮೇಲೆ ಹಾಗೂ ಅರ್ಹತೆಗನುಗುಣವಾಗಿ ಕಾಲಕಾಲಕ್ಕೆ ಪದೋನ್ನತಿಯನ್ನು ನೀಡಲಾಗುತ್ತಿದೆ.

- ಈ ರೀತಿಯ ಪದೋನ್ನತಿಗಳಲ್ಲಿ ಯಾವುದೇ ರೀತಿಯ ತಾರತಮ್ಯ ಮಾಡದೆ, ಪ್ರತಿಯೊಂದು ವಿಶ್ವವಿದ್ಯಾಲಯಗಳಿಂದ ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ.

***********